ಜಿಲ್ಲಾಧಿಕಾರಿ ಹಾಗೂ ಜಿಲ್ಲಾ
ದಂಡಾಧಿಕಾರಿಯವರ ಕಾರ್ಯಾಲಯ,
ದಕ್ಷಿಣ ಕನ್ನಡ ಜಿಲ್ಲೆ,
ಮಂಗಳೂರು – 575 001.

ಕರ್ನಾಟಕ ಸರಕಾರ
( ಕಂದಾಯ ಇಲಾಖೆ )

Deputy Commissioner &
District Magistrate's Office,
Dakshina Kannada District,
Mangaluru – 575 001.

ನಂ. ಸಿಎಎಲ್.ಸಿಆರ್ 22/2020/88613/ಸಿ1 ದಿನಾಂಕ: 29-08-2020

ಡೀನ್/ ನಿರ್ದೇಶಕರು ವೈದ್ಯಕೀಯ ಮಹಾವಿದ್ಯಾಲಯ

1. ಕೆ.ಎಂ.ಸಿ. ಮೆಡಿಕಲ್ ಕಾಲೇಜು ಮಂಗಳೂರು.
2. ಫಾದರ್ ಮುಲ್ಲರ್ ಮೆಡಿಕಲ್ ಕಾಲೇಜು ಮಂಗಳೂರು.
3. ಕೆ.ಎಸ್.ಹೆಗ್ಡೆ ಮೆಡಿಕಲ್ ಕಾಲೇಜು ಮಂಗಳೂರು.
4. ಎ.ಜೆ. ಮೆಡಿಕಲ್ ಕಾಲೇಜು ಮಂಗಳೂರು.
5. ಯನಪೋಯಾ ಮೆಡಿಕಲ್ ಕಾಲೇಜು ಮಂಗಳೂರು.
6. ಶ್ರೀನಿವಾಸ್ ಮೆಡಿಕಲ್ ಕಾಲೇಜು ಮಂಗಳೂರು.
7. ಕೆ.ವಿ.ಜಿ ಮೆಡಿಕಲ್ ಕಾಲೇಜು ಸುಳ್ಯ.
8. ಕಣಚೂರು ಮೆಡಿಕಲ್ ಕಾಲೇಜು ಮಂಗಳೂರು.

ಮಾನ್ಯರೇ,

**ವಿಷಯ:** ವೈದ್ಯಕೀಯ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಂತಿಮ ವರ್ಷದ ವಿದ್ಯಾರ್ಥಿಗಳು ಹಾಗೂ 4ನೇ ವರ್ಷದ ವಿದ್ಯಾರ್ಥಿಗಳನ್ನು ಕೋವಿಡ್-19 ನಿಯಂತ್ರಣ ಕಾರ್ಯದಲ್ಲಿ ತೊಡಗಿಸಿಕೊಳ್ಳಲು ರಜೆಯಿಂದ ಹಿಂದಕ್ಕೆ ಕರೆತರಿಸುವ ಬಗ್ಗೆ.

*************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದ.ಕ. ಜಿಲ್ಲೆಯಲ್ಲಿ ಪ್ರತೀ ದಿನ ಸರಾಸರಿ 250 ಕ್ಕಿಂತ ಹೆಚ್ಚು ಖಚಿತ ಕೋವಿಡ್ ಪ್ರಕರಣಗಳು ದಾಖಲಾಗುತ್ತಿದ್ದು, ಜಿಲ್ಲೆಯಲ್ಲಿ ಈವರೆಗೆ 10,000 ಕ್ಕಿಂತಲೂ ಹೆಚ್ಚು ಪ್ರಕರಣಗಳು ವರದಿಯಾಗಿರುತ್ತದೆ. ಅಲ್ಲದೆ, ಸಾವಿನ ಪ್ರಕರಣಗಳು ಕೂಡಾ ಹೆಚ್ಚಾಗುತ್ತಿದ್ದು, ಕೋವಿಡ್ ಸೋಂಕು ಹರಡುವಿಕೆಯನ್ನು ನಿಯಂತ್ರಿಸುವಲ್ಲಿ ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಆರೋಗ್ಯ ಸೇವೆಯನ್ನು ನೀಡಲು ಕ್ರಮಕೈಗೊಳ್ಳಬೇಕಾಗಿರುತ್ತದೆ. ಜಿಲ್ಲೆಯಲ್ಲಿನ ವೈದ್ಯರು / ಶುಶ್ರೂಷಕ ಸಿಬ್ಬಂದಿಗಳು ರಾತ್ರಿ ಹಗಲೆನ್ನದೆ ಶಕ್ತಿ ಮೀರಿ ದುಡಿಯುತ್ತಿದ್ದು, ಕೋವಿಡ್ ನಿಯಂತ್ರಣಕ್ಕಾಗಿ ಹೆಚ್ಚಿನ ಶುಶ್ರೂಷಕರ ಸೇವೆಯು ಅಗತ್ಯವಿರುತ್ತದೆ.

ಈ ನಿಟ್ಟಿನಲ್ಲಿ ತಮ್ಮ ವಿದ್ಯಾ ಸಂಸ್ಥೆಗಳಲ್ಲಿ MBBS ವಿದ್ಯಾಭ್ಯಾಸವನ್ನು ಮಾಡುತ್ತಿರುವ ಅಂತಿಮ ವರ್ಷದ ವಿದ್ಯಾರ್ಥಿಗಳು ಹಾಗೂ 4 ನೇ ವರ್ಷದ ವಿದ್ಯಾರ್ಥಿಗಳ ಸೇವೆಯನ್ನು ಬಳಸಿಕೊಳ್ಳಲು ನಿರ್ಧರಿಸಲಾಗಿದೆ. ಭವಿಷ್ಯದಲ್ಲಿ ಆರೋಗ್ಯ ಸೇವೆಯನ್ನು ನೀಡಲು ಸಿದ್ಧರಾಗಿರುವ ಈ ವಿದ್ಯಾರ್ಥಿಗಳಿಗೆ ವೃತ್ತಿಪರ ಸವಾಲನ್ನು ಒದಗಿಸಿದಂತಾಗುತ್ತದೆ.

ಆದ್ದರಿಂದ ತಮ್ಮ ವಿದ್ಯಾ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರಕೃತ ರಜೆಯಲ್ಲಿ ಮನೆಗೆ ತೆರಳಿರುವ MBBS ವಿದ್ಯಾಭ್ಯಾಸವನ್ನು ಮಾಡುತ್ತಿರುವ ಅಂತಿಮ ವರ್ಷದ ವಿದ್ಯಾರ್ಥಿಗಳು ಹಾಗೂ 4 ನೇ ವರ್ಷದ ಎಲ್ಲಾ ವಿದ್ಯಾರ್ಥಿಗಳನ್ನು ದಿನಾಂಕ: 03-09-2020 ರೊಳಗೆ ವಾಪಾಸು ಕರೆಸಿಕೊಂಡು ಆರೋಗ್ಯ ಸೇವೆಗೆ ಒದಗಿಸಲು ವ್ಯವಸ್ಥೆ ಮಾಡುವಂತೆ ತಿಳಿಸಿದೆ.

ತಮ್ಮ ವಿಶ್ವಾಸಿ,

29/08/2020
ಜಿಲ್ಲಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಪ್ರತಿ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದ.ಕ ಜಿಲ್ಲೆ, ಮಂಗಳೂರು